**ಕರ್ನಾಟಕ ಸರ್ಕಾರ**
**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/01/ಇಎಪಿ/2024.

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆರಸ್ತೆ, ಬೆಂಗಳೂರು-560001,
ದಿನಾಂಕ: 02.04.2025

**ಸುತ್ತೋಲೆ**

| | |
|---|---|
| ವಿಷಯ: | 2024-25 ನೇ ಶೈಕ್ಷಣಿಕ ಸಾಲಿನಲ್ಲಿ ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ನಡೆಸುವ ಏಪ್ರಿಲ್/ಮೇ-2025 ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗೆ ನೋಂದಾಯಿಸಿಲ್ಲದ ವಿದ್ಯಾರ್ಥಿಗಳ ಪಟ್ಟಿ ಪ್ರಕಟಿಸುವ ಬಗ್ಗೆ. |
| ಉಲ್ಲೇಖ: | 1) ಈ ಕಛೇರಿ ಜ್ಞಾಪನ ಸಂಖ್ಯೆ: ಬಿಟಿಇ/01/ಇಎಪಿ/2024 ದಿನಾಂಕ:03.02.2025<br>2) ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ:ಇಡಿ 138 ಡಿಟಿಇ 2023 ದಿನಾಂಕ:06.02.2024 |

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಜ್ಞಾಪನದನ್ವಯ 2024-25 ನೇ ಶೈಕ್ಷಣಿಕ ಸಾಲಿನಲ್ಲಿ ತಾಂತ್ರಿಕ ಪರೀಕ್ಷಾ ಮಂಡಳಿಯಿಂದ ನಡೆಸುವ ಏಪ್ರಿಲ್/ಮೇ-2025 ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗೆ ವಿದ್ಯಾರ್ಥಿಗಳನ್ನು ನೋಂದಾಯಿಸಿಕೊಳ್ಳುವ ಕುರಿತು ವಿವಿಧ ಹಂತಗಳಲ್ಲಿ ದಂಡರಹಿತ/ದಂಡಸಹಿತವಾಗಿ ಶುಲ್ಕ ಪಾವತಿಸಲು ದಿನಾಂಕಗಳನ್ನು ನಿಗದಿಪಡಿಸಲಾಗಿತ್ತು.

ಅದರಂತೆ, ರೂ.400/- (ರೂ. ನಾಲ್ಕು ನೂರು ಮಾತ್ರ) ದಂಡ ಶುಲ್ಕದೊಡನೆ (ಪ್ರತಿ ಸೆಮಿಸ್ಟರ್ ಗೆ) ಪರೀಕ್ಷಾ ಶುಲ್ಕ ಪಾವತಿಸಲು ದಿನಾಂಕ:01.04.2025 ಕೊನೆಯ ದಿನಾಂಕವಾಗಿತ್ತು. ಅದುದರಿಂದ **ದಿನಾಂಕ:01.04.2025 ರವರೆಗೂ ನಿಗದಿತ ಪರೀಕ್ಷಾ ಶುಲ್ಕ ಪಾವತಿಸಿ ಏಪ್ರಿಲ್/ಮೇ 2025 ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗೆ ನೋಂದಾಯಿಸಿಲ್ಲದ ವಿದ್ಯಾರ್ಥಿಗಳ ಕೋರ್ಸ್ ವಾರು / ಸೆಮಿಸ್ಟರ್ ವಾರು ವಿವರಗಳನ್ನು ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸಿ ಹಾಗೂ ಸುತ್ತೋಲೆ ಮೂಲಕ ತರಗತಿಗಳಲ್ಲಿ ವಿದ್ಯಾರ್ಥಿಗಳ ಗಮನಕ್ಕೆ ತರಲು ಮತ್ತು ಪೋಷಕರಿಗೆ ಮಾಹಿತಿ ನೀಡಲು ಕ್ರಮವಹಿಸುವಂತೆ ಎಲ್ಲಾ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.**

ಮುಂದುವರೆದು, ಉಲ್ಲೇಖ (02) ಸರ್ಕಾರದ ತಿದ್ದುಪಡಿ ಆದೇಶದನ್ವಯ ಏಪ್ರಿಲ್/ಮೇ 2025 ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆ ಪ್ರಾರಂಭವಾಗುವ ಮೂರು ದಿನಗಳ ಮೊದಲು ರೂ. 2000/- (ಎರಡು ಸಾವಿರ ಮಾತ್ರ) ವಿಶೇಷ ದಂಡ ಶುಲ್ಕದೊಡನೆ (ಪ್ರತಿ ಸೆಮಿಸ್ಟರ್ ಪರೀಕ್ಷೆಗೆ) ಪರೀಕ್ಷಾ ಶುಲ್ಕ ಪಾವತಿಸಿ ಏಪ್ರಿಲ್/ಮೇ 2025 ರ ಪರೀಕ್ಷೆಗೆ ನೋಂದಾಯಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಕಾರ್ಯದರ್ಶಿಗಳು
ತಾಂತ್ರಿಕ ಪರೀಕ್ಷಾ ಮಂಡಳಿ

**ಇವರಿಗೆ,**
ಎಲ್ಲಾ ಸರ್ಕಾರಿ / ಖಾಸಗಿ ಅನುದಾನಿತ / ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ - ಮುಂದಿನ ಸೂಕ್ತ ಕ್ರಮಕ್ಕಾಗಿ.

**ಪ್ರತಿ:**
1. ಆಯುಕ್ತರ ಆಪ್ತ ಶಾಖೆ - ಅವಗಾಹನೆಗಾಗಿ.
2. ನಿರ್ದೇಶಕರ ಆಪ್ತ ಶಾಖೆ- ಅವಗಾಹನೆಗಾಗಿ.
3. ಇ-ಗವರ್ನೆನ್ಸ್ ವಿಭಾಗಕ್ಕೆ (ವೆಬ್ ಸೈಟ್‌ನಲ್ಲಿ ಪ್ರಕಟಿಸಲು)
4. ಇಸಿಎಸ್/ಇಎಫ್‌ಎಸ್/ಇಆರ್‌ಎಸ್, ಮುಂದಿನ ಕ್ರಮಕ್ಕಾಗಿ.
5. ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
6. ರಿಜಿಸ್ಟ್ರಾರ್ (ಪರೀಕ್ಷೆ)
7. ಕಾರ್ಯದರ್ಶಿಯವರ ಆಪ್ತ ಶಾಖೆ.
8. ಉಪ ನಿರ್ದೇಶಕರು (ಪರೀಕ್ಷೆ)
9. ಗಣಕ ಕೇಂದ್ರ ಬಿಟಿಇ ಲಿಂಕ್ಸ್ ವೆಬ್ ಪೋರ್ಟಲ್ ನಲ್ಲಿ ಪ್ರಕಟಿಸಲು.

Scanned with OKEN Scanner